**9 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.**

**ಎಸ್.ಸಿ.ನಂ.264/2019**

**(ಚಾ.ಸಾ.14/ಪ್ರಾ.ಸಾ.8)**

ತಾಃ 20.09.2023 ರಂದು ಸಾಕ್ಷಿಗೆ ಪ್ರಮಾಣ ವಚನ ಮಾಡಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು: | ಪೂಣಚ್ಛ |
| ತಂದೆಯ ಹೆಸರು | ಮಂದಣ್ಣ |
| ವಯಸ್ಸು | 56 ವರ್ಷ |
| ಉದ್ಯೋಗ | ರಿಯಲ್ ಎಸ್ಟೇಟ್ ಬಿಸಿನೆಸ್ |
| ವಾಸ ಸ್ಥಳ | ಶೆಟ್ಟಿಹಳ್ಳಿ ರಸ್ತೆ, ಬೀದರಹಳ್ಳಿ, ಬೀಂಗಳೂರು |

**ಮುಖ್ಯ ವಿಚಾರಣೆ ಃ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿದಾರರು ನ್ಯಾಯಾಲಯದ ಮುಂದೆ ಹಾಜರಿರುವ ಆರೋಪಿಯನ್ನು ನೋಡಿ ನೋಡಿರುವುದಾಗಿ ನುಡಿದಿರುತ್ತಾರೆ. 2018 ನೇ ಸಾಲಿನಲ್ಲಿ ಬೆಳಿಗ್ಗೆ 11.30 ರ ಸಮಯಕ್ಕೆ ನನ್ನನ್ನು ಪೊಲೀಸರು ಠಾಣೆಗೆ ಕರೆದುಕೊಂಡು ಹೋಗಿರುತ್ತಾರೆ. ಆ ಸಮಯದಲ್ಲಿ ಆರೋಪಿ ಠಾಣೆಯಲ್ಲಿ ಇದ್ದು ಸ್ಥಳವನ್ನು ತೋರಿಸಿ ಚಿನ್ನದ ಸರ ಹಾಜರುಪಡಿಸುವುದಾಗಿ ಪೊಲೀಸರಿಗೆ ತಿಳಿಸಿರುತ್ತಾರೆ. ಅದರಂತೆ ಪೊಲೀಸ್ ಇನ್ಸ್

ಎಸ್.ಸಿ.ನಂ.264/2019
ಚಾ.ಸಾ.14/ಪ್ರಾ.ಸಾ.8

ಪೆಕ್ಟರ್ ನವರು ಮುತ್ತ್ಯಾಲಮ್ಮ ನಗರಕ್ಕೆ ಕರೆದುಕೊಂಡು ಹೋಗಿರುತ್ತಾರೆ. ಆರೋಪಿ ಕಬೋರ್ಡ್ ಮೇಲೆ ಇಟ್ಟಿದ್ದ ಚಿನ್ನದ ಚೂರನ್ನು ತೆಗೆದು ಹಾಜರುಪಡಿಸಿರುತ್ತಾರೆ. ಪೊಲೀಸರು ಸ್ಥಳದಲ್ಲಿ ಮಧ್ಯಾಹ್ನ 12.30 ರವರೆಗೆ ಬೆರಳಚ್ಚು ಮಾಡಿ ನನ್ನ ಸಹಿ ಪಡೆದಿರುತ್ತಾರೆ. ಸಾಕ್ಷಿದಾರರು ಮಹಜರ್ ನಲ್ಲಿ ಇರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಮಹಜರ್ ಅನ್ನು ನಿ.ಪಿ.6 ಹಾಗೂ ಸಾಕ್ಷಿದಾರರ ಸಹಿಯನ್ನು ನಿ.ಪಿ.6(ಎ) ಎಂದು ಗುರುತಿಸಲಾಯಿತು. ಪೊಲೀಸರು ಆ ದಿನ ಜಪ್ತಿಪಡಿಸಿದ ಸರವನ್ನು ನೋಡಿದಲ್ಲಿ ನಾನು ಗುರುತಿಸುತ್ತೇನೆ. ಅದನ್ನು ಈಗಾಗಲೇ ಮು.ಮಾ.7 ಎಂದು ಗುರುತಿಸಿರುತ್ತದೆ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>

ಆರೋಪಿ ಪರ ವಕೀಲರನ್ನು ಕೂಗಿಸಿದ್ದು ಗೈರು ಹಾಜರಿದ್ದು ಆರೋಪಿ ಪಾಟೀ ಸವಾಲಿಗೆ ಸಮಯ ಕೋರಿದ್ದು, ಯಾವುದೇ ಸಕಾರಣಗಳು ಇಲ್ಲವಾಗಿ ಆರೋಪಿಯ ಮನವಿಯನ್ನು ತಿರಸ್ಕರಿಸಿ, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

<u>ಮರುವಿಚಾರಣೆಃಇಲ್ಲ.</u>

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿದೆ.)

ಓ. ಹೇ. ಕೇ. ಸ. ಸಹಿ ಮಾಡಿದ್ದಾರೆ.

(ಎಸ್.ಶ್ರೀಧರ)
9 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.